ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ಮಲ್ಟಿಪ್ಲೆಕ್ಸ್‌ಗಳಲ್ಲಿ ಮಾರಾಟ ಮಾಡುವ ವಸ್ತುಗಳ ದರ ಏರಿಕೆಯ ಕುರಿತು

ಶ್ರೀ ಎನ್. ರವಿಕುಮಾರ್(ವಿಧಾನ ಸಭೆಯಿಂದ ಚುನಾಯಿತರಾದವರು):-

1573 (1811) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಲ್ಟಿಪ್ಲೆಕ್ಸ್‌ಗಳಲ್ಲಿ ಮಾರಾಟ ಮಾಡುವ ತಿಂಡಿ-ತಿನಿಸು ಪಾನೀಯಗಳಿಗೆ ಮಾರುಕಟ್ಟೆ ದರಕ್ಕಿಂತ ಅಧಿಕ ದರ ವಿಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ರೀತಿಯಾಗಿ ಅಧಿಕ ದರ ವಿಧಿಸಲು ನಿಯಮಗಳಲ್ಲಿ ಅವಕಾಶವಿದೆಯೇ;

(ಆ) ತಿಂಡಿ-ತಿನಿಸು ಪಾನೀಯಗಳಿಗೆ ಮಾರುಕಟ್ಟೆ ದರಕ್ಕಿಂತ ಅಧಿಕ ದರ ವಿಧಿಸುತ್ತಿರುವ ಮಲ್ಟಿಪ್ಲೆಕ್ಸ್‌ಗಳ ಲೈಸನ್ಸ್ ರದ್ದು ಮಾಡಲು ಸರ್ಕಾರ ಚಿಂತಿಸಿದೆಯೇ ; ಇಲ್ಲವಾದಲ್ಲಿ ಅಂತಹ ಮಲ್ಟಿಪ್ಲೆಕ್ಸ್‌ಗಳ ಮೇಲೆ ಯಾವ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ;

(ಇ) ಕಳೆದ 2 ವರ್ಷಗಳಲ್ಲಿ ತಿಂಡಿ-ತಿನಿಸು ಪಾನೀಯಗಳಿಗೆ ಮಾರುಕಟ್ಟೆ ದರಕ್ಕಿಂತ ಅಧಿಕ ದರ ವಿಧಿಸುತ್ತಿರುವ ಮಲ್ಟಿಪ್ಲೆಕ್ಸ್ ಚಿತ್ರಮಂದಿರಗಳ ವಿರುದ್ಧ ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)